ಪಿ.ಡಬ್ಲೂ.**1**

ದಿನಾಂಕಃ 11.10.2023 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಬಿ.ಎ.ಎಸ್. ವಕೀಲರಿಂದ

ನಾನು ಈ ದಾವೆಯ ವಾದಿಯಾಗಿರುತ್ತೇನೆ. ನನ್ನ ಮುಂದುವರೆದ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಿಃ27.09.1976 ರ ಕ್ರಯ ಪತ್ರವನ್ನು ನಿಪಿ-1 ಎಂದು, ಸ.ನಂ.15/1 ರ ಗಣಕೀಕೃತ ಪಹಣಿಯನ್ನು ನಿಪಿ-2 ಎಂದು, ವಂಶವೃಕ್ಷವನ್ನು ನಿಪಿ-3 ಎಂದು, ನನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ನಿಪಿ-4 ಎಂದು, ದಿಃ08.06.2020 ರಂದು ಪ್ರತಿವಾದಿಗೆ ನೀಡಿದ ತಿಳುವಳಿಕೆ ಪತ್ರದ ಕಚೇರಿ ಪ್ರತಿಯನ್ನು ನಿಪಿ-5 ಎಂದು, ಸದರಿ ತಿಳುವಳಿಕೆ ಪತ್ರವನ್ನು ಅಂಚೆ ಮುಖೇನ ಕಳುಹಿಸಿದ ಬಗ್ಗೆ ಅಂಚೆ ರಶೀದಿಯನ್ನು ನಿಪಿ-5(ಎ) ಎಂದು, ಹುಣಸೂರು ಅಂಚೆ ಮಾಸ್ಟರ್ ರವರು ನೀಡಿದ ವರದಿಯನ್ನು ನಿಪಿ-6 ಎಂದು, ಋಣಭಾರ ಪ್ರಮಾಣ ಪತ್ರವನ್ನು ನಿಪಿ-7 ಎಂದು ಗುರುತಿಸಲಾಯಿತು.

(ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದು ಸಮಯವನ್ನು ನೀಡಲಾಯಿತು.)

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ,
ನ್ಯಾಯಾಧೀಶರು, ಹುಣಸೂರು.